**All India Radio: Bangalore**
**National Bulletin In Kannada**
**10.05.2026  7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**10.05.2026  7.35 am**

**<><><*><><<>**

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ಇಂದು ಕರ್ನಾಟಕ, ತೆಲಂಗಾಣಕ್ಕೆ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ

೨. ತಮಿಳುನಾಡಿನ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣವಚನ ಸ್ವೀಕರಿಸಲಿರುವ ಟಿವಿಕೆ ಪಕ್ಷದ ಮುಖ್ಯಸ್ಥ ಜೋಸೆಫ್ ವಿಜಯ್

೩. ಕರ್ನಾಟಕ ಸರ್ಕಾರದ ಸಚಿವ ಡಿ.ಸುಧಾಕರ್ ಚಿಕಿತ್ಸೆ ಫಲಕಾರಿಯಾಗದೆ ಇಂದು ನಿಧನ; ಚಳ್ಳಕೆರೆಯಲ್ಲಿ ಅಂತ್ಯಕ್ರಿಯೆ

೪. ಹೈದರಾಬಾದ್‌ನಲ್ಲಿ ಆಕ್ಟಿವ್ಲಿ ಕೂಲ್ಡ್ ಫುಲ್ ಸ್ಕೇಲ್ ಸ್ಕ್ರ್ಯಾಮ್‌ಜೆಟ್ ಕಂಬಸ್ಟರ್‌ನ ದೀರ್ಘಾವಧಿಯ ಪರೀಕ್ಷೆ ಯಶಸ್ವಿಗೊಳಿಸಿದ ಡಿಆರ್‌ಡಿಒ

೫. ಐಪಿಎಲ್ ಟಿ-೨೦ ಕ್ರಿಕೆಟ್; ರಾಜಸ್ತಾನ ರಾಯಲ್ಸ್ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೭೭ ರನ್‌ಗಳ ಜಯ

**<><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಕರ್ನಾಟಕ ಮತ್ತು ತೆಲಂಗಾಣಕ್ಕೆ ಭೇಟಿ ನೀಡಲಿದ್ದಾರೆ. ಇಂದು ಬೆಳಗ್ಗೆ ೧೧ ಗಂಟೆ ಸುಮಾರಿಗೆ ಬೆಂಗಳೂರಿನಲ್ಲಿ ನಡೆಯಲಿರುವ ಆರ್ಟ್ ಆಫ್ ಲೀವಿಂಗ್‌ನ ೪೫ನೇ ವಾಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಇದೇ ವೇಳೆ ಆರ್ಟ್ ಆಫ್ ಲೀವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಹೊಸದಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಕಾರ್ಯಕ್ರಮ ಉದ್ದೇಶಿಸಿ, ಪ್ರಧಾನಿ ಮಾತನಾಡಲಿದ್ದಾರೆ. ಬಳಿಕ ಅವರು, ಹೈದರಾಬಾದ್‌ಗೆ ಪ್ರಯಾಣಿಸಲಿದ್ದಾರೆ. ಮಧ್ಯಾಹ್ನ ೩ ಗಂಟೆ ಸುಮಾರಿಗೆ ಹೈದರಾಬಾದ್‌ನಲ್ಲಿ ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಹೈದರಾಬಾದ್-ಪಣಜಿ ಆರ್ಥಿಕ ಕಾರಿಡಾರ್‌ನಲ್ಲಿ ಗುಡೆಬೆಳ್ಳೂರಿನಿಂದ ಮೆಹಬೂಬ್ ನಗರ್‌ವರೆಗಿನ ರಾಷ್ಟ್ರೀಯ ಹೆದ್ದಾರಿ ೧೬೭ ರ ಚತುಷ್ಪಥ ಯೋಜನೆಗೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದರ ಒಟ್ಟು ಯೋಜನಾ ವೆಚ್ಚ ೩ ಸಾವಿರದ ೧೭೫ ಕೋಟಿ ರೂಪಾಯಿ ಆಗಿದೆ. ಹೈದರಾಬಾದ್‌ನಲ್ಲಿ ಅತ್ಯಾಧುನಿಕ ಕ್ಯಾನ್ಸರ್ ನಿವಾರಣ ಮಲ್ಟಿ ಸ್ಪೆಷಾಲಿಟಿ ಸಿಂಧು ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ನಂತರ ಪ್ರಧಾನಿ ಅವರು ವಾರಂಗಲ್‌ನಲ್ಲಿ ಪಿಎಂ ಮಿತ್ರಾ ಪಾರ್ಕ್ ಉದ್ಘಾಟಿಸಲಿದ್ದಾರೆ.

**<><><*><><<>**

ಟಿವಿಕೆ ಪಕ್ಷದ ಮುಖ್ಯಸ್ಥ ಸಿ ಜೋಸೆಫ್ ವಿಜಯ್ ಅವರು, ಇಂದು ಬೆಳಿಗ್ಗೆ ಚೆನ್ನೈನಲ್ಲಿ ತಮಿಳುನಾಡಿನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಿಜಯ್ ಅವರೊಂದಿಗೆ ಒಂಬತ್ತು ಟಿವಿಕೆ ಸಚಿವರು ಸಹ ಪ್ರಮಾಣವಚನ ಸ್ವೀಕರಿಸುವ ನಿರೀಕ್ಷೆಯಿದೆ. ತಮಿಳುನಾಡು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರು, ೨೩೪ ಸದಸ್ಯರ ಸದನದಲ್ಲಿ ೧೨೦ ಶಾಸಕರ ಬೆಂಬಲವನ್ನು ಪಡೆದ ನಂತರ ವಿಜಯ್ ಅವರನ್ನು ನಿಯೋಜಿತ ಮುಖ್ಯಮಂತ್ರಿಯನ್ನಾಗಿ ನೇಮಿಸಿದರು. ತಲಾ ಇಬ್ಬರು ಶಾಸಕರನ್ನು ಹೊಂದಿರುವ ವಿಸಿಕೆ ಮತ್ತು ಐಯುಎಂಎಲ್‌ನಿಂದ ಬೆಂಬಲ ನೀಡಿದ ನಂತರ ವಿಜಯ್ ಅವರನ್ನು ಮುಖ್ಯಮಂತ್ರಿಯಾಗಿ ನೇಮಿಸಲಾಯಿತು. ಲೋಕಭವನದ ಪ್ರಕಾರ ರಾಜ್ಯಪಾಲರು, ರಾಜ್ಯದಲ್ಲಿ ನೂತನ ಸರ್ಕಾರ ರಚಿಸಲು ವಿಜಯ್ ಅವರನ್ನು ಆಹ್ವಾನಿಸಿದ್ದಾರೆ. ಇದೇ ೧೩ ರಂದು ಅಥವಾ ಅದಕ್ಕೂ ಮೊದಲು ವಿಧಾನಸಭೆಯಲ್ಲಿ ವಿಶ್ವಾಸ ಮತ ಯಾಚಿಸುವಂತೆ ರಾಜ್ಯಪಾಲರು ವಿಜಯ್ ಅವರಿಗೆ ನಿರ್ದೇಶನ ನೀಡಿದ್ದಾರೆ.

<>><><*><><<>

ಕೇರಳದಲ್ಲಿ ಸರ್ಕಾರ ರಚನೆ ಕುರಿತು ಚರ್ಚಿಸಲು ಕಾಂಗ್ರೆಸ್ ಪಕ್ಷದ ಉನ್ನತ ನಾಯಕರು ನಿನ್ನೆ ನವದೆಹಲಿಯಲ್ಲಿ ಸಭೆ ನಡೆಸಿದರು. ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಪಕ್ಷದ ಹಿರಿಯ ನಾಯಕ ರಾಹುಲ್ ಗಾಂಧಿ, ಪಕ್ಷದ ರಾಜ್ಯ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ದೀಪಾ ದಾಸ್ ಮುನ್ಷಿ, ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮತ್ತು ಕೇರಳದ ಹಿರಿಯ ನಾಯಕರಾದ ರಮೇಶ್ ಚೆನ್ನಿತ್ತಲ ಮತ್ತು ವಿ.ಡಿ. ಸತೀಶನ್ ಭಾಗವಹಿಸಿದ್ದರು. ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರು ಕೇರಳದ ನೂತನ ಮುಖ್ಯಮಂತ್ರಿಯ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಮತ್ತು ಹೆಸರನ್ನು ಶೀಘ್ರದಲ್ಲೇ ಘೋಷಿಸಲಾಗುವುದು ಎಂದು ಪಕ್ಷ ತಿಳಿಸಿದೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪುದುಚೇರಿಯ ಮುಖ್ಯಮಂತ್ರಿಯಾಗಿ ಎನ್. ರಂಗಸಾಮಿ ಅವರನ್ನು ನೇಮಕ ಮಾಡಿದ್ದಾರೆ. ನೇಮಕಾತಿಯ ನಂತರ, ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಶ್ನಾಥನ್ ಅವರು ರಂಗಸಾಮಿ ಅವರನ್ನು ಕೇಂದ್ರಾಡಳಿತ ಪ್ರದೇಶದಲ್ಲಿ ಹೊಸ ಸರ್ಕಾರ ರಚಿಸಲು ಆಹ್ವಾನಿಸಿದ್ದಾರೆ. ರಂಗಸಾಮಿ ಅವರು, ಇದೇ ೧೩ ರಂದು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಏಪ್ರಿಲ್ ೯ ರಂದು ನಡೆದ ಕೇಂದ್ರಾಡಳಿತ ಪ್ರದೇಶದ ಚುನಾವಣೆಯಲ್ಲಿ ಎಐಎನ್‌ಆರ್‌ಸಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಭರ್ಜರಿ ಜಯ ಸಾಧಿಸಿದ ನಂತರ ರಂಗಸಾಮಿ ಅವರು ಐದನೇ ಅವಧಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್, ನಿನ್ನೆ ಟ್ರಿನಿಡಾಡ್ ಮತ್ತು ಟೊಬೆಗೊದ ಪ್ರಧಾನಿ ಕಮಲಾ ಪ್ರಸಾದ್-ಬಿಸ್ಸೆಸ್ಸರ್ ಅವರೊಂದಿಗೆ ನೆಲ್ಸನ್ ದ್ವೀಪಕ್ಕೆ ಭೇಟಿ ನೀಡಿದರು.

ನೆಲ್ಸನ್ ದ್ವೀಪದಲ್ಲಿ ತ್ವರಿತ ಪರಿಣಾಮ ಯೋಜನೆಗಾಗಿ ಡಾ.ಜೈಶಂಕರ್, ಕಮಲಾ ಪ್ರಸಾದ್-ಬಿಸ್ಸೆಸ್ಸರ್ ಅವರೊಂದಿಗೆ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ವಿದೇಶಾಂಗ ಸಚಿವರು, ಭಾರತದ ನೆರವಿನಿಂದ ಬೆಂಬಲಿತವಾದ ಈ ಯೋಜನೆಯು, ನಿರಂತರ ಪ್ರಯಾಣದ ಹಂಚಿಕೆಯ ಪರಂಪರೆಯನ್ನು ಸಂರಕ್ಷಿಸುತ್ತದೆ ಮತ್ತು ಪ್ರದರ್ಶಿಸುತ್ತದೆ ಎಂದು ಹೇಳಿದ್ದಾರೆ.

<>><><*><><<>

ಕಾರ್ನಾಟಕದ ಹಿರಿಯೂರಿನಿಂದ ಕಾಂಗ್ರೆಸ್ ಶಾಸಕರಾಗಿ ಆಯ್ಕೆಯಾಗಿ, ಪ್ರಸ್ತುತ ರಾಜ್ಯ ಸರ್ಕಾರದಲ್ಲಿ, ಯೋಜನಾ ಮತ್ತು ಸಾಂಖ್ಯಿಕ ಖಾತೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ, ಡಿ.ಸುಧಾಕರ್, ಚಿಕಿತ್ಸೆ ಫಲಕಾರಿಯಾಗದೆ ಇಂದು ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಅನಾರೋಗ್ಯದಿಂದ ಬಳಲುತ್ತಿದ್ದ ಅವರು, ಮೊಣಕಾಲು ಶಸ್ತ್ರ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಾಗಿದ್ದರು. ಬಳಿಕ ಶ್ವಾಸಕೋಶದ ಸೋಂಕು ಕಾಣಿಸಿಕೊಂಡಿತ್ತು. ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಇಂದು ಬೆಳಗಿನ ಜಾವ ಸಚಿವ ಡಿ.ಸುಧಾಕರ್ ನಿಧನರಾದರು ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ. ಮೂಲಗಳ ಪ್ರಕಾರ, ಚಳ್ಳಕೆರೆಯಲ್ಲಿ ಅಂತ್ಯಕ್ರಿಯೆ ಜರುಗಲಿದೆ ಎಂದು ವರದಿಯಾಗಿದೆ.

<>><><*><><<>

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ- ಡಿಆರ್‌ಡಿಒ ಹೈದರಾಬಾದ್‌ನಲ್ಲಿ ತನ್ನ ಆಕ್ಟಿವ್ಲಿ ಕೂಲ್ಡ್ ಫುಲ್ ಸ್ಕೇಲ್ ಸ್ಕ್ರ್ಯಾಮ್‌ಜೆಟ್ ಕಂಬಸ್ಟರ್‌ನ ದೀರ್ಘಾವಧಿಯ ಪರೀಕ್ಷೆ ಯಶಸ್ವಿಯಾಗಿ ನಡೆಸಿದೆ. ಈ ಪರೀಕ್ಷೆಯು, ಒಂದು ಸಾವಿರ ೨೦೦ ಸೆಕೆಂಡುಗಳಿಗಿಂತ ಹೆಚ್ಚು ರನ್-ಟೈಮ್ ಅನ್ನು ಸಾಧಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ವರ್ಷದ ಜನವರಿಯಲ್ಲಿ ನಡೆದ ಹಿಂದಿನ ಏಳುನೂರು ಸೆಕೆಂಡುಗಳ ಪರೀಕ್ಷೆಯನ್ನು ಇದು ಮೀರಿಸಿದೆ. ಈ ಯಶಸ್ವಿ ಪರೀಕ್ಷೆಯು, ಭಾರತವನ್ನು ಸುಧಾರಿತ ಏರೋಸ್ಪೇಸ್ ಸಾಮರ್ಥ್ಯಗಳು ಮತ್ತು ನಿರಂತರವಾಗಿ ಹೊರಹೊಮ್ಮುತ್ತಿರುವ ಯುದ್ಧ ತಂತ್ರಜ್ಞಾನಗಳಲ್ಲಿ ಮುಂಚೂಣಿಯಲ್ಲಿ ಇರಿಸುತ್ತದೆ. ಇದು ಭಾರತದ ಹೈಪರ್ಸಾನಿಕ್ ಕ್ರೂಸ್ ಕ್ಷಿಪಣಿ ಅಭಿವೃದ್ಧಿ ಕಾರ್ಯಕ್ರಮವನ್ನು ಬಲಪಡಿಸುತ್ತದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಡಿಆರ್‌ಡಿಒದ ಉದ್ಯಮ ಪಾಲುದಾರರು ಮತ್ತು ಶೈಕ್ಷಣಿಕತೆಯನ್ನು ಶ್ಲಾಘಿಸಿದ್ದಾರೆ ಮತ್ತು ಈ ಸಾಧನೆಯನ್ನು ರಾಷ್ಟ್ರದ ಹೈಪರ್ಸಾನಿಕ್ ಕ್ರೂಸ್ ಕ್ಷಿಪಣಿ ಅಭಿವೃದ್ಧಿ ಕಾರ್ಯಕ್ರಮಕ್ಕೆ ಅತ್ಯುತ್ತಮ ಅಡಿಪಾಯ ಎಂದು ಬಣ್ಣಿಸಿದ್ದಾರೆ.

<>><><*><><<>

ಕೇಂದ್ರ ಸಚಿವಾಲಯಗಳು, ಇಲಾಖೆಗಳು, ಸ್ವಾಯತ್ತ ಸಂಸ್ಥೆಗಳು ಮತ್ತು ಕೇಂದ್ರ ಸಾರ್ವಜನಿಕ ವಲಯದ ಉದ್ಯಮಗಳಲ್ಲಿ ಕೆಲಸ ಮಾಡುತ್ತಿರುವ ಹೊರಗುತ್ತಿಗೆ ಮತ್ತು ಗುತ್ತಿಗೆ ಕಾರ್ಮಿಕರಿಗೆ ಕಾರ್ಮಿಕ ಸಂಹಿತೆಗಳಿಗೆ ನೂತನ ಸಂಗ್ರಹಣೆ-ಸಂಬಂಧಿತ ಅನುಸರಣೆ ಕ್ರಮಗಳ ಮೂಲಕ ರಕ್ಷಣೆಯನ್ನು ಗಮನಾರ್ಹವಾಗಿ ಬಲಪಡಿಸಲು ಕೇಂದ್ರ ಸರ್ಕಾರ ಮುಂದಾಗಿದೆ.

ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು, ಸುಧಾರಣೆಗಳು ವೇತನವನ್ನು ಸಕಾಲಿಕವಾಗಿ ಪಾವತಿಸುವುದು, ಸಾಮಾಜಿಕ ಭದ್ರತಾ ಕೊಡುಗೆಗಳನ್ನು ಕಡ್ಡಾಯವಾಗಿ ರವಾನಿಸುವುದು, ಗುತ್ತಿಗೆದಾರರು ಮತ್ತು ಪ್ರಧಾನ ಉದ್ಯೋಗದಾತರ ಹೆಚ್ಚಿನ ಹೊಣೆಗಾರಿಕೆ ಮತ್ತು ಕಾರ್ಮಿಕ ಕಾನೂನುಗಳ ಉಲ್ಲಂಘನೆಯ ವಿರುದ್ಧ ಬಲವಾದ ಜಾರಿ ಕಾರ್ಯವಿಧಾನಗಳನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ಹೇಳಿದೆ.  ಸರ್ಕಾರಿ ಒಪ್ಪಂದಗಳು ಮತ್ತು ಹರಾಜಿನ ಅರ್ಹತೆಯೊಂದಿಗೆ ಕಾರ್ಮಿಕ ಕಾನೂನು ಅನುಸರಣೆಯನ್ನು ನೇರವಾಗಿ ಸಂಪರ್ಕಿಸುವ ಮೂಲಕ, ಈ ಕ್ರಮಗಳು ವೇತನ ಪಾವತಿಗಳಲ್ಲಿನ ವಿಳಂಬ ಮತ್ತು ಗುತ್ತಿಗೆ ಕಾರ್ಮಿಕರ ಮೇಲೆ ಪರಿಣಾಮ ಬೀರುವ ಶಾಸನಬದ್ಧ ಬಾಕಿಗಳಲ್ಲಿನ ಡೀಫಾಲ್ಟ್ ಅನ್ನು ತಡೆಯಲು ಪ್ರಯತ್ನಿಸುತ್ತವೆ.

<>><><*><><<>

ಜೈಪುರದ ಸವಾಯ್ ಮಾನ್ ಸಿಂಗ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ, ಗುಜರಾತ್ ಟೈಟಾನ್ಸ್ ತಂಡ ರಾಜಸ್ತಾನ ರಾಯಲ್ಸ್ ತಂಡದ ವಿರುದ್ಧ ೭೭ ರನ್‌ಗಳ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಗುಜರಾತ್, ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೯ ರನ್ ಗಳಿಸಿತು. ಗುಜರಾತ್ ಪರ ನಾಯಕ ಶುಬ್ಮನ್ ಗಿಲ್ ೮೪ ಹಾಗೂ ಸಾಯಿ ಸುದರ್ಶನ್ ೫೫ ರನ್ ಗಳಿಸಿದರು. ಈ ಗುರಿ ಬೆನ್ನತ್ತಿದ ರಾಜಸ್ತಾನ್ ೧೬.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೫೨ ರನ್ ಗಳಿಸುವುದರೊಂದಿಗೆ ಸೋಲೊಪ್ಪಿಕೊಂಡಿತು.೪ ವಿಕೆಟ್ ಪಡೆಯುವುದರೊಂದಿಗೆ ಗುಜರಾತ್ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ರಶೀದ್ ಖಾನ್, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಚೆನ್ನೈನ ಎಂ.ಎ.ಚಿದಂಬರ್ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ರಾಯ್‌ಪುರದ ಶಹೀದ್ ವೀರ್ ನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ರಾತ್ರಿ ೭.೩೦ ಕ್ಕೆ ಆರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಸೆಣಸಲಿವೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ  ><><<>